



ಅರುಣ ಪಿ. ಭಟ್ಟ

## ವಾರಭವಿಷ್ಯ: 14.1.2021ರಿಂದ 20.1.2021ರವರೆಗೆ



**ಮೇಷ**

ಕುಟುಂಬದ ಬಗ್ಗೆ ಹೆಮ್ಮೆ ಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ನಿಮ್ಮ ಸಹೋದ್ಯೋಗಿಗಳ ಜತೆಗೆ ಇರುವ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ. ಪ್ರಮುಖವಾದ ತೀರ್ಮಾನವೊಂದನ್ನು ಕೈಗೊಳ್ಳಲಿದ್ದೀರಿ. ಶುಭದಿನ 18. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.



**ವೃಷಭ**

ಶುಭ ಕಾರ್ಯವನ್ನು ಆಯೋಜಿಸುವ ಸಾಧ್ಯತೆ ಇದೆ. ಈ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಈ ಅವಧಿಯಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮಾಡಿ. ಯಾವುದೇ ವ್ಯವಹಾರ, ಭೇಟಿ ಇತ್ಯಾದಿ ಕೆಲಸಗಳಲ್ಲಿ ಯಶಸ್ಸು ಕಾಣಬಹುದು. ಸಹೋದ್ಯೋಗಿಗಳ ಜತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಶುಭದಿನ 19. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.



**ಮಿಥುನ**

ಆರೋಗ್ಯ ಸುಧಾರಿಸುವುದು. ಆಕಸ್ಮಿಕ ಖರ್ಚು ಸಂಭವ. ಆಸ್ತಿ ಖರಿದಿ ಬಗ್ಗೆ ಚಿಂತನೆ, ಕಲಾವಿದರಿಗೆ ಉತ್ತಮ ವಾರ. ಸಂಘ ಸಂಸ್ಥೆಗಳಿಂದ ಧನಲಾಭ. ಶತ್ರುಗಳು ಹಿಂದೆ ಸರಿಯುವರು. ವೃತ್ತಿ ವ್ಯವಹಾರದಲ್ಲಿ ಲಾಭ ವ್ಯಾವಹಾರಿಕ ಅನುಕೂಲತೆ. ಸರಕಾರಿ ಕೆಲಸ ಶೀಘ್ರವಾಗುವುದು. ತಂದೆ ತಾಯಿಯವರ ಆರೋಗ್ಯ ಸುಧಾರಣೆ, ಮಾನ, ಮನ್ನಣೆ ದೊರೆಯುವುದು. ಶುಭದಿನ 20. ಚಂಡಿ ಪಾರಾಯಣ ಮಾಡಿರಿ.



**ಕಟಕ**

ನವೋಲ್ಲಾಸ ಬರುವದು. ಧರ್ಮ ದಾನಕ್ಕಾಗಿ ಖರ್ಚು. ಮಿತ್ರರಿಗೆ ಸಹಾಯ. ವ್ಯಾಪಾರದಲ್ಲಿ ಅಧಿಕ ಲಾಭ ಹಳೆಯ ಮಿತ್ರರ ಆಗಮನ. ಹಲವು ದಿನಗಳ ಸಮಸ್ಯೆ ಬಗೆಹರೆಯುವುದು. ಹೊಟ್ಟೆನೋವಿನ ಕಾಟ ಕಾಡುವ ಸಾಧ್ಯತೆ ಇದೆ. ಮನೆಯಲ್ಲಿ ಸಂಭ್ರಮದ ಸಂದರ್ಭ ಕಳೆಗಟ್ಟಲಿದೆ. ಮಕ್ಕಳಿಂದ ಶುಭವಾರ್ತೆ. ಮಹತ್ವದ ಕಾಗದ ಪತ್ರಗಳ ರಕ್ಷಣೆ. ಸಹೋದರರ ಸಹಾಯ. ಶುಭದಿನ 20. ಶಿವ ಕವಚ ಓದಿರಿ.



**ಸಿಂಹ**

ಮನೆಯವರ ಜತೆಗೆ ಹೆಚ್ಚಿನ ಸಮಯ ಕಳೆಯುತ್ತೀರಿ. ಈ ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ನೀವು ಪ್ರತಿನಿಧಿಸುವ ಸಂಸ್ಥೆಯ ಸಾಮರ್ಥ್ಯ ಹೆಚ್ಚಿಸುವ ನಿಟ್ಟಿನಲ್ಲಿ ಕೆಲವು ಸೂತ್ರಗಳನ್ನು ರೂಪಿಸಲಿದ್ದೀರಿ. ಇದು ಒತ್ತಡವಾಗಿ ಪರಿಣಮಿಸಿ, ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ. ಶುಭದಿನ 15. ಸೌಂದರ್ಯಲಹರಿ ಪಠಿಸಿರಿ.



**ಕನ್ಯಾ**

ಎಂಜಿನಿಯರ್ ಕ್ಷೇತ್ರದವರಿಗೆ ಈ ಹಿಂದೆಂದಿಗಿಂತ ಹೆಚ್ಚಿನ ಅವಕಾಶಗಳು ಬರುತ್ತವೆ. ನಿಮ್ಮಲ್ಲಿ ಆಗುತ್ತಿರುವ ಸಕಾರಾತ್ಮಕ ಪರಿಣಾಮ ಅನುಭವಕ್ಕೆ ಬರುತ್ತದೆ. ಈ ವರೆಗಿನ ನಿಮ್ಮ ಆದಾಯ ಮೂಲಗಳಿಂದ ಬರುವ ಗಳಿಕೆ ಹೆಚ್ಚಾಗಲಿದೆ. ನಿಮ್ಮ ಹಣದ ಮೂಲವನ್ನು ಸರಿಯಾದ ದಾರಿಯಲ್ಲಿ ವಿತರಿಸಲು ಯಶಸ್ಸು ಸಾಧಿಸುತ್ತೀರಿ. ಕೌಟುಂಬಿಕ ಜೀವನ ಸಂತುಷ್ಟವಾಗಿ ಇರುತ್ತದೆ. ಶುಭದಿನ 18. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.



**ತುಲಾ**

ವೃತ್ತಿಪರ ಬದುಕಿನಲ್ಲಿ ಪ್ರಗತಿ ಕಾಣುವ ಯೋಗ ಇದೆ. ಇಂಟರವ್ಯೂಗಳಲ್ಲಿ ಭಾಗವಹಿಸುವವರು ಅನುಕೂಲಕರ ಫಲಿತಾಂಶ ನಿರೀಕ್ಷಿಸಬಹುದು. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಹಾಗೂ ಬಡ್ತಿ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಶುಭದಿನ 20. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.



**ವೃಶ್ಚಿಕ**

ಬಹಳ ಮುಖ್ಯವಾದ ಪಟ್ಟಿಯೊಂದನ್ನು ಸಿದ್ಧ ಮಾಡಿಕೊಳ್ಳುವುದಕ್ಕೆ ವಾರದ ಶುರುವಿನಲ್ಲಿ ಸಿದ್ಧರಾಗುತ್ತೀರಿ. ಹಿರಿಯ ಅಧಿಕಾರಿಗಳು ಬೇಸರಿಸಿಕೊಳ್ಳುತ್ತಾರೆ. ಈ ಅವಧಿಯಲ್ಲಿ ತಾಳ್ಮೆ ಮತ್ತು ಧೈರ್ಯ ಬಹಳ ಮುಖ್ಯವಾಗುತ್ತದೆ. ಮುಖ್ಯವಾಗಿ ಸಮಯದ ಕೊರತೆ ವಿಪರೀತವಾಗಿ ಕಾಡುತ್ತದೆ. ವಾರದ ಮಧ್ಯ ಭಾಗದಲ್ಲಿ ವ್ಯಾಪಾರ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ಶುಭದಿನ 15. ಶ್ರೀ ದುರ್ಗಾಪಾರಾಯಣ ಮಾಡಿರಿ.



**ಧನಸ್ಸು**

ಆಸ್ತಿ ಖರೀದಿಗೆ ಕಾಗದಪತ್ರಗಳನ್ನು ಕೂಲಂಕಷವಾದ ಪರಿಶೀಲನೆ ನಡೆಸಲಿದ್ದೀರಿ. ದೊಡ್ಡ ಪ್ರಮಾದಗಳನ್ನು ತಡೆಯುವಂತೆ ಸನ್ನಿವೇಶಗಳು ನಿಮಗೆ ಪೂರಕ ಆಗಲಿದೆ. ಆದರೆ ಈ ಸಮಯದಲ್ಲಿ ಆರೋಗ್ಯ ಸ್ಥಿತಿ ಪೂರಕವಾಗಿಲ್ಲ. ಭುಜದ ನೋವು, ತಲೆ ನೋವು ಹಾಗೂ ಕಣ್ಣಿನ ಬೇನೆ ನಿಮ್ಮನ್ನು ಕಾಡಲಿದೆ. ಇದರಿಂದ ಚಿಂತೆಗೆ ಒಳಗಾಗುತ್ತೀರಿ. ಶುಭದಿನ 17. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.



**ಮಕರ**

ವಾರದ ಶುರುವಿನಲ್ಲೇ ಉದ್ಯಮದಲ್ಲಿ ಪ್ರಗತಿ. ಪ್ರತಿಷ್ಠಿತ ಸಂಸ್ಥೆಯೊಂದರ ಜತೆಗೆ ಮಹತ್ವದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ಒತ್ತಡದ ಕೆಲಸ ಇದ್ದರೂ ಆರಾಮವಾಗಿ ಪೂರೈಸಲು ನಿಮ್ಮಿಂದ ಸಾಧ್ಯವಾಗಲಿದೆ. ವೈವಾಹಿಕ ಜೀವನ ಸಂತೋಷದಾಯಕವಾಗಿ ಇರುತ್ತದೆ. ಕೆಲಸ ಕಾರ್ಯ ಮುಂದೂಡಬೇಕಾದ ಸನ್ನಿವೇಶ ಎದುರಾಗುತ್ತದೆ. ಶುಭದಿನ 16. ಕಾಲಭೈರವನ ಸೇವೆ ಮಾಡಿರಿ.



**ಕುಂಭ**

ವಾರದ ಶುರುವಿನಲ್ಲಿ ನಿಮ್ಮ ಬಳಿ ಇರುವ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಆ ನಂತರ ಅದರ ಅನುಷ್ಠಾನಕ್ಕಾಗಿ ಹಾಕುವ ಶ್ರಮಕ್ಕೆ ನಿರೀಕ್ಷಿತ ಫಲಿತಾಂಶ ದೊರೆಯಲಿದೆ. ಮಾರಾಟ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಲಾಭಕ್ಕೆ ಅವಕಾಶಗಳಿವೆ. ಪ್ರೇಮಿಗಳಿಗೆ ಸಂಗಾತಿಯ ಭಾವನೆಗಳಿಗೆ ಗೌರವ ನೀಡುತ್ತೀರಿ. ಶುಭದಿನ 18. ಗಣಪತಿಗೆ ದೂರ್ವಾರ್ಚನೆ ಮಾಡಿರಿ.



**ಮೀನ**

ಈ ಅವಧಿಯಲ್ಲಿ ದೇವತಾ ಆರಾಧನೆಗೆ ನಿಮ್ಮ ಶ್ರಮ ಹಾಕುತ್ತೀರಿ. ಬಹಳ ಒತ್ತಡ ಹಾಕಿ ನಿಮ್ಮಿಂದ ಕೆಲಸ ತೆಗೆಸುವ ಯತ್ನಗಳಾಗುತ್ತವೆ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕವಾಗಿ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ಈ ಅವಧಿಯಲ್ಲಿ ಉಸಿರಾಟದ ಸಮಸ್ಯೆ ಹಾಗೂ ಕೆಮ್ಮು ನೆಗಡಿ ಕಾಡಬಹುದು. ಆರೋಗ್ಯದಲ್ಲಿ ಚೇತರಿಕೆ ಕಾಣಿಸಿಕೊಳ್ಳುತ್ತದೆ. ಶುಭದಿನ 18. ಕನಕಧಾರಾ ಸ್ತೋತ್ರ ಪಠಣಮಾಡಿರಿ.